## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 253
ಸದಸ್ಯರ ಹೆಸರು : ಶ್ರೀ ಭೀಮರಾವ್ ಬಸವರಾಜ ಪಾಟೀಲ್
ಉತ್ತರಿಸುವ ಸಚಿವರು : ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು
ಉತ್ತರಿಸುವ ದಿನಾಂಕ : 28.01.2026

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಚಿತ್ರದುರ್ಗ ಜಿಲ್ಲೆ ಹಿರಿಯೂರು ತಾಲ್ಲೂಕು ಧರ್ಮಪುರದಲ್ಲಿ ಕರ್ನಾಟಕ ರಾಜ್ಯ ಸಾರಿಗೆ ನಿಗಮದ ಬಸ್ ನಿಲ್ದಾಣ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಚಿತ್ರದುರ್ಗ ವಿಭಾಗ ಹಿರಿಯೂರು ತಾಲ್ಲೂಕು ವ್ಯಾಪ್ತಿಯ ಧರ್ಮಪುರ ಗ್ರಾಮದಲ್ಲಿ ಬಸ್ ನಿಲ್ದಾಣ ನಿರ್ಮಿಸಲು ಧರ್ಮಪುರ ಗ್ರಾಮ ಪಂಚಾಯತಿಯು 19 ½ ಗುಂಟೆ ವಿಸ್ತೀರ್ಣದ ನಿವೇಶನವನ್ನು ನಿಗಮಕ್ಕೆ ಉಚಿತವಾಗಿ ನೀಡಿರುತ್ತದೆ. ಸದರಿ ಬಸ್ ನಿಲ್ದಾಣ ನಿರ್ಮಾಣಕ್ಕೆ ಆದೇಶ ಸಂಖ್ಯೆ: ಪಿಡಿಎಸ್ 153 ಕೆಎಲ್ಎಸ್ 2025, ದಿನಾಂಕ:26.11.2025 ರನ್ವಯ ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ ರೂ.200.00 ಲಕ್ಷಗಳ ಅನುದಾನವನ್ನು ಮಂಜೂರು ಮಾಡಲಾಗಿದ್ದು, ಪ್ರಸ್ತುತ ನಿಗಮವು ಬಸ್ ನಿಲ್ದಾಣ ಕಾಮಗಾರಿಗಾಗಿ ಟೆಂಡರ್ ಆಹ್ವಾನಿಸಿದ್ದು, ಟೆಂಡರ್ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ.<br><br>ಟೆಂಡರ್ ಪ್ರಕ್ರಿಯೆ ಮೂಲಕ ಗುತ್ತಿಗೆದಾರರನ್ನು ನೇಮಿಸಿ, ನಿಗದಿಪಡಿಸಿದ ಕಾಲಮಿತಿಯೊಳಗೆ ಬಸ್ ನಿಲ್ದಾಣ ನಿರ್ಮಾಣ ಕಾಮಗಾರಿಯನ್ನು ಆದ್ಯತೆಯ ಮೇರೆಗೆ ಪೂರ್ಣಗೊಳಿಸಿ ಸಾರ್ವಜನಿಕರ ಉಪಯೋಗಕ್ಕಾಗಿ ಕಾರ್ಯಾಚರಣೆಗೊಳಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು. |
| ಆ) | ಬಂದಿದ್ದಲ್ಲಿ, ಧರ್ಮಪುರದಲ್ಲಿ ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣವನ್ನು ಸ್ಥಾಪಿಸಲು ಈ ವರೆವಿಗೂ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು) | |
| ಇ) | ಸದರಿ ಸ್ಥಳದಲ್ಲಿ ಅತಿ ಹೆಚ್ಚು ಶಾಲಾ/ಕಾಲೇಜು ಮಕ್ಕಳು ಗರ್ಭಿಣಿಯರು, ವೃದ್ಧರು, ರೈತರು ಹಾಗೂ ದಿನಗೂಲಿ ಮಾಡುವ ಸಾಮಾನ್ಯ ವರ್ಗದವರು ಬಸ್‌ಗೆ ರಸ್ತೆಯಲ್ಲಿ ಕಾಯುತ್ತಾ ಬಿಸಿಲು ಮಳೆಯಲ್ಲಿಯೇ ನಿಲ್ಲುವಂತಹ ಪರಿಸ್ಥಿತಿ ಎದುರಿಸುತ್ತಿರುವುದನ್ನು ತಪ್ಪಿಸಲು ಯಾವ ಕಾಲಮಿತಿಯೊಳಗೆ ಕ್ರಮ ಕೈಗೊಳ್ಳುವುದು? (ಸಂಪೂರ್ಣ ವಿವರ ನೀಡುವುದು) | |

ಕಡತ ಸಂಖ್ಯೆ: ಟಿಡಿ 7 ಟಿಸಿಕ್ಯೂ 2026

(ರಾಮಲಿಂಗಾರೆಡ್ಡಿ)
ಸಾರಿಗೆ ಮತ್ತು ಮುಜರಾಯಿ ಸಚಿವರು